ಕರ್ನಾಟಕ ಸರ್ಕಾರ

ಉಪ ನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ

1ನೇ ಮಹಡಿ 'ಬಿ ಬ್ಲಾಕ್' ರಜತಾದ್ರಿ, ಮಣಿಪಾಲ ಉಡುಪಿ ಜಿಲ್ಲೆ.

ದೂರವಾಣಿ ಸಂಖ್ಯೆ : 0820- 2574978 ; 2574972 E Mail:wcd97@ymail.com

ಸಂಖ್ಯೆ:ಉನಿಉ:ಐಸಿಡಿ:ಅಂಕಾಸ:ಸಿಆರ್:29:2019-20/1168 ದಿನಾಂಕ:10.01.2020

ರಿಗೆ,

ಜಿಲ್ಲಾ ವಾರ್ತಾಧಿಕಾರಿ
ವಾರ್ತಾ ಮತ್ತು ಪ್ರಚಾರ ಇಲಾಖೆ
ಉಡುಪಿ

ಮಾನ್ಯರೇ,

ವಿಷಯ: ಉಚಿತವಾಗಿ ಪತ್ರಿಕಾ ಪ್ರಕಟಣೆ ನೀಡುವ ಕುರಿತು.

***

ಉಡುಪಿ ಜಿಲ್ಲೆಯ ನಾಲ್ಕು ಶಿಶು ಅಭಿವೃದ್ಧಿ ಯೋಜನೆಗಳ ವ್ಯಾಪ್ತಿಯಲ್ಲಿ ಬರುವ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿಯಿರುವ ಅಂಗನವಾಡಿ ಕಾರ್ಯಕರ್ತೆ ಮತ್ತು ಅಂಗನವಾಡಿ ಸಹಾಯಕಿಯರ ಗೌರವ ಸೇವೆಯ ಹುದ್ದೆಗಳಿಗೆ ಆಯ್ಕೆ ಮಾಡಲು ಅರ್ಹ ಮಹಿಳಾ ಅಭ್ಯರ್ಥಿಗಳಿಗೆ ಮಾತ್ರ ದಿನಾಂಕ:12.01.2020 ರಿಂದ 05.02.2020ರೊಳಗೆ ಆನ್-ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ. WEBSITE http://udupi.nic.in ಈ ಸಂಬಂಧ ಜಿಲ್ಲೆಯ ಎಲ್ಲಾ ಪತ್ರಿಕೆ ಹಾಗೂ ಮಾಧ್ಯಮಗಳಲ್ಲಿ ಉಚಿತವಾಗಿ ವ್ಯಾಪಕ ಪ್ರಚಾರ ನೀಡಲು ಕೋರಿದೆ. ಪತ್ರಿಕಾ ಪ್ರಕಟಣೆಯ ಪತ್ರಿಯನ್ನು ಈ ಪತ್ರದೊಂದಿಗೆ ಲಗತ್ತಿಸಿ ಸಲ್ಲಿಸಿದೆ.

ತಮ್ಮ ನಂಬುಗೆಯ,

ಉಪನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ಉಡುಪಿ

ಪ್ರತಿಯನ್ನು:-

1. ಮಾನ್ಯ ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು ಅಂಗನವಾಡಿ ಕಾರ್ಯಕರ್ತೆಯರ ಮತ್ತು ಸಹಾಯಕಿಯರ ನೇಮಕಾತಿ ಸಮಿತಿ ಉಡುಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಉಡುಪಿ ಇವರ ಅವಗಾಹನೆಗಾಗಿ ಸಲ್ಲಿಸಿದೆ.
3. ಎಲ್ಲಾ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಗೆ ಸಂಬಂಧಿಸಿದ ಗ್ರಾಮ ಪಂಚಾಯತ್ ವ್ಯಾಪ್ತಿಯ ಸರಕಾರಿ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸುವಂತೆ ಕ್ರಮ ಕೈಗೊಳ್ಳಲು ಸಲ್ಲಿಸಿದೆ.

ಕರ್ನಾಟಕ ಸರ್ಕಾರ
ಉಪ ನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
1ನೇ ಮಹಡಿ 'ಬಿ ಬ್ಲಾಕ್' ರಜತಾದ್ರಿ, ಮಣಿಪಾಲ ಉಡುಪಿ ಜಿಲ್ಲೆ.
ದೂರವಾಣಿ ಸಂಖ್ಯೆ : 0820- 2574978 ; 2574972 E Mail:wcd97@ymail.com

ಸಂಖ್ಯೆ:ಉನಿಉ:ಐಸಿಡಿ:ಅಂಕಾಸ:ಸಿಆರ್:29:2019-20 ದಿನಾಂಕ:10.01.2020

ವಿಷಯ: ಅಂಗನವಾಡಿ ಕಾರ್ಯಕರ್ತೆ/ ಸಹಾಯಕಿಯರ ಹುದ್ದೆ ಭರ್ತಿ ಮಾಡಲು ಅರ್ಜಿ ಆಹ್ವಾನಿಸುವ ಬಗ್ಗೆ.

ಉಲ್ಲೇಖ: 1. ಸರಕಾರಿ ಆದೇಶ ಸಂಖ್ಯೆ: ಮಮಇ:303:ಐಸಿಡಿ:2017 ಬೆಂಗಳೂರು, ದಿನಾಂಕ: 23.09.2017
2. ಸರಕಾರಿ ಆದೇಶ ಸಂಖ್ಯೆ: ಮಮಇ:27:ಐಸಿಡಿ:2017 ಬೆಂಗಳೂರು, ದಿನಾಂಕ:01.12.2017

*****

ಉಡುಪಿ ಜಿಲ್ಲೆಯ ನಾಲ್ಕು ಶಿಶು ಅಭಿವೃದ್ಧಿ ಯೋಜನೆ ವ್ಯಾಪ್ತಿಯ ಈ ಕೆಳಗೆ ಕಾಣಿಸಲಾದ ಗ್ರಾಮಗಳ ವ್ಯಾಪ್ತಿಯ ಅಂಗನವಾಡಿ ಕೇಂದ್ರಗಳಿಗೆ ಕಾರ್ಯಕರ್ತೆ ಮತ್ತು ಅಂಗನವಾಡಿ ಸಹಾಯಕಿಯಾಗಿ ಗೌರವ ಸೇವೆ ಸಲ್ಲಿಸಲು ಈ ಕೆಳಗೆ ತೋರಿಸಲಾದ ಮೀಸಲಾತಿ ಹೊಂದಿದ 18 ರಿಂದ 35 ವರ್ಷದೊಳಗಿನ ಅರ್ಹ ಸ್ಥಳೀಯ (ಅದೇ ಗ್ರಾಮದ) ಮಹಿಳಾ ಅಭ್ಯರ್ಥಿಗಳಿಂದ ಮಾತ್ರ ಈ ಕೆಳಗೆ ತೋರಿಸಲಾದ ನಮೂನೆಯಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ಅಂಗನವಾಡಿ ಕಾರ್ಯಕರ್ತೆಗೆ ಎಸ್.ಎಸ್.ಎಲ್.ಸಿ ತೇರ್ಗಡೆಯಾಗಿರಬೇಕು. ಅಂಗನವಾಡಿ ಸಹಾಯಕಿಗೆ ಕನಿಷ್ಠ 4ನೇ ತರಗತಿ ತೇರ್ಗಡೆಯಾಗಿದ್ದು ಗರಿಷ್ಠ ವಿದ್ಯಾರ್ಹತೆ 9 ತರಗತಿ. ಈ ಕೆಳಗೆ ತೋರಿಸಲಾದ ಎಲ್ಲಾ ದಾಖಲೆಗಳೊಂದಿಗೆ ಸಂಬಂಧಿತರು ಭರ್ತಿ ಮಾಡಿದ ಅರ್ಜಿಗಳನ್ನು **ದಿನಾಂಕ:05.02.2020** ರೊಳಗೆ ಆನ್. ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಸೂಚಿಸಿದೆ.

**ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲೆಗಳು:**

1. ಮಾಹಿತಿಯನ್ನು ಭರ್ತಿ ಮಾಡಿದ ಅರ್ಜಿ (ಆನ್‌ಲೈನ್).
2. ಜನನ ಪ್ರಮಾಣ ಪತ್ರ/ ಜನ್ಮ ದಿನಾಂಕ ಇರುವ ಎಸ್.ಎಸ್.ಎಲ್.ಸಿ ಅಂಕಪಟ್ಟಿ, ವಯೋಮಿತಿ ದಿನಾಂಕ:01.01.2020ಕ್ಕೆ 18 ವರ್ಷ ತುಂಬಿರಬೇಕು 35 ವರ್ಷ ಮೀರಿರಬಾರದು.
3. ತಹಶೀಲ್ದಾರರು/ ಉಪತಹಶೀಲ್ದಾರರಿಂದ ಪಡೆದ 1 ವರ್ಷದೊಳಗಿನ ವಾಸಸ್ಥಳ ದೃಢೀಕರಣ ಪತ್ರ.
4. ವಿದ್ಯಾರ್ಹತೆ ಬಗ್ಗೆ ಪ್ರಮಾಣ ಪತ್ರ (ಕಾರ್ಯಕರ್ತೆ ಹುದ್ದೆಗೆ ಎಸ್.ಎಸ್.ಎಲ್.ಸಿ ತೇರ್ಗಡೆ ವಿದ್ಯಾರ್ಹತೆ ಬಗ್ಗೆ ಪ್ರಮಾಣ ಪತ್ರ) (ಸಹಾಯಕಿ ಹುದ್ದೆಗೆ 4ನೇ ತರಗತಿ ತೇರ್ಗಡೆ ಗರಿಷ್ಠ 9ನೇ ತರಗತಿ ತೇರ್ಗಡೆ).
5. ಅಂಗನವಾಡಿ ಕಾರ್ಯಕರ್ತೆ ನೇಮಕಾತಿಗಳಲ್ಲಿ ವಿಕಲಚೇತನರಿಗೆ 10 ವರ್ಷ ವಯೋಮಿತಿ ಸಡಿಲಿಕೆಯನ್ನು ನೀಡಿದೆ.
6. ಮೀಸಲಾತಿ ಅಭ್ಯರ್ಥಿಗಳ ಜಾತಿ ಪ್ರಮಾಣ ಪತ್ರ.
7. ವಿಧವೆಯಾಗಿದ್ದಲ್ಲಿ ಪತಿಯ ಮರಣ ಪ್ರಮಾಣ ಪತ್ರ (ವಿಧವಾ ವೇತನದ ದೃಢೀಕರಣವನ್ನು ಪರಿಗಣಿಸುವುದಿಲ್ಲ)
8. ಆತ್ಮಹತ್ಯೆ ಮಾಡಿಕೊಂಡ ರೈತರ ಪತ್ನಿಯಾಗಿದ್ದಲ್ಲಿ ಉಪವಿಭಾಗಾಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ.

9. ಅಂಗವಿಕಲರಾಗಿದ್ದಲ್ಲಿ ಪ್ರಮಾಣ ಪತ್ರ (ದೈಹಿಕ ಅಂಗವಿಕಲತೆ ಶೇ.60 ಕ್ಕಿಂತ ಕಡಿಮೆ ಇದ್ದಲ್ಲಿ ಮಾತ್ರ) (ಅಂ.ಕಾರ್ಯಕರ್ತೆ ಹುದ್ದೆಗೆ ಅರ್ಜಿ ಸಲ್ಲಿಸುವವರಿಗೆ ಮಾತ್ರ) (ಅಂಗವಿಕಲ ವೇತನದ ದೃಢೀಕರಣವನ್ನು ಪರಿಗಣಿಸುವುದಿಲ್ಲ)
10. ವಿಚ್ಛೇದಿತರಾಗಿದ್ದಲ್ಲಿ ಪ್ರಮಾಣ ಪತ್ರ (ನ್ಯಾಯಾಲಯದಲ್ಲಿ ಪಡೆದಿರಬೇಕು.)
11. ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ ನಡೆಸಲ್ಪಟ್ಟ ಮಾಜಿ ದೇವದಾಸಿಯರ ಸಮೀಕ್ಷೆಯ ಪಟ್ಟಿಯಲ್ಲಿರುವ ಮಾಜಿ ದೇವದಾಸಿಯರ ಮಕ್ಕಳು ಎಂಬುದರ ಬಗ್ಗೆ ಮಹಿಳಾ ಅಭಿವೃದ್ಧಿ ನಿಗಮದ ಅಧಿಕಾರಿಗಳಿಂದ ಪ್ರಮಾಣ ಪತ್ರ.
12. ಪರಿತ್ಯಕ್ತೆಯಾಗಿದ್ದಲ್ಲಿ ಸಂಬಂದಿಸಿದ ಗ್ರಾಮ ಪಂಚಾಯತ್‌ನಿಂದ ಪಡೆದ ಪ್ರಮಾಣ ಪತ್ರ.
13. ಇಲಾಖೆಯ ಸುಧಾರಣಾ ಸಂಸ್ಥೆ/ ರಾಜ್ಯ ಮಹಿಳಾ ನಿಲಯಗಳ ನಿವಾಸಿ ಎಂಬ ಬಗ್ಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ.
14. ಯೋಜನಾ ನಿರಾಶ್ರಿತರಾಗಿದ್ದಲ್ಲಿ ತಹಶೀಲ್ದಾರರಿಂದ ಪಡೆದ ಪ್ರಮಾಣ ಪತ್ರ.

ತಮ್ಮ ವಿಶ್ವಾಸಿ,

ಉಪನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ಉಡುಪಿ

ಕರ್ನಾಟಕ ಸರ್ಕಾರ

**ಉಪ ನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ**

**1ನೇ ಮಹಡಿ 'ಬಿ ಬ್ಲಾಕ್' ರಜತಾದ್ರಿ, ಮಣಿಪಾಲ ಉಡುಪಿ ಜಿಲ್ಲೆ.**

**ದೂರವಾಣಿ ಸಂಖ್ಯೆ : 0820- 2574978 ; 2574972** **E Mail:wcd97@ymail.com**

ಸಂಖ್ಯೆ:ಉನಿಉ:ಐಸಿಡಿ:ಅಂಕಾಸ:ಸಿಆರ್:29:2019–20 ದಿನಾಂಕ:10.01.2020

## ಅಧಿಸೂಚನೆ

ಉಡುಪಿ ಜಿಲ್ಲೆಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ನಾಲ್ಕು ಶಿಶು ಅಭಿವೃದ್ಧಿ ಯೋಜನೆಗಳ ವ್ಯಾಪ್ತಿಯಲ್ಲಿ ಬರುವ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿಯಿರುವ 06 ಅಂಗನವಾಡಿ ಕಾರ್ಯಕರ್ತೆ ಮತ್ತು 39 ಅಂಗನವಾಡಿ ಸಹಾಯಕಿಯರ ಗೌರವ ಸೇವೆಯ ಹುದ್ದೆಗಳಿಗೆ ನೇಮಕ ಮಾಡಲು ಅರ್ಹ ಮಹಿಳಾ ಅಭ್ಯರ್ಥಿಗಳಿಂದ ಆನ್–ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ.

ಬ್ರಹ್ಮಾವರ ಯೋಜನೆಯ ಕೋಟತಟ್ಟು ಗ್ರಾಮದ ಆರಾಮ ದೇವಸ್ಥಾನ ಅಂಗನವಾಡಿ ಸಹಾಯಕಿಯ ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಮಾತ್ರ ಕನ್ನಡ ಭಾಷೆಯೊಂದಿಗೆ ಆಯಾ ಅಲ್ಪ ಸಂಖ್ಯಾತ ಸಮುದಾಯದ ಭಾಷೆ ಬಲ್ಲವರಾಗಿರಬೇಕು, ಈ ಸಂದಂಧ ಹೆಚ್ಚಿನ ವಿವರಗಳಿಗೆ ಸಂಬಂಧಪಟ್ಟ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿಯನ್ನು ಸಂಪರ್ಕಿಸಲು ಕೋರಿದೆ.

ದೂರವಾಣಿ ಸಂಖ್ಯೆ: ಉಡುಪಿ:0820 2524055, ಬ್ರಹ್ಮಾವರ: 0820 2562244
ಕುಂದಾಪುರ: 08254–230807, ಕಾರ್ಕಳ: 08258–230992

| | |
|---|---|
| ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಪ್ರಾರಂಭದ ದಿನಾಂಕ | 12.01.2020 |
| ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 05.02.2020 |
| WEBSITE | http://udupi.nic.in |

ತಮ್ಮ ವಿಶ್ವಾಸಿ,

ಉಪನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ಉಡುಪಿ